# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಯಲಹಂಕ ವಲಯ

### ಸಹಾಯಕ ಕಾರ್ಯಪಾಲಕ ಅಭಿಯಂತರರು ಕಛೇರಿ, ಯಲಹಂಕ ಉಪ ವಿಭಾಗ

### ವಾರ್ಡ್ ನಂ. 02 (ಚೌಡೇಶ್ವರಿ) ವಾರ್ಡ್ ಕಮಿಟಿ ಸಭೆ.

ದಿನಾಂಕ: 03-04-2021 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ-02 ಚೌಡೇಶ್ವರಿ ವಾರ್ಡ್ ಸಮಿತಿಯ ಮಾನ್ಯ ನೊಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ಯಲಹಂಕ ವಿಭಾಗ ಕಚೇರಿಯಲ್ಲಿರುವ ವಾರ್ಡ್ ಕಛೇರಿಯಲ್ಲಿ ನೆಡೆದ ವಾರ್ಡ್ ಕಮಟಿ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಷರಾ |
|---|---|---|---|
| 1 | ಶ್ರೀ.ಅಶೋಕ್ ಪಾಟಿಲ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ನೊಡೆಲ್ ಅಧಿಕಾರಿಗಳು. | ಶ್ರೀ. ರಮೇಶ್ (ಸ.ಕಾ.ಅ.) (ಬಿ.ಡಬ್ಲ್ಯೂಎಸ್.ಎಸ್.ಬಿ) | |
| | | ಶ್ರೀ. ಶಶಿಕುಮಾರ್ (ಸ.ಅ) (ಬಿ.ಡಬ್ಲ್ಯೂಎಸ್.ಎಸ್.ಬಿ) | |
| 2 | ಶ್ರೀ.ಚಂದ್ರಕಾಂತ್ ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಸಮಿತಿ ಕಾರ್ಯದರ್ಶಿ | ಶ್ರೀ. ಲಿಂಗರಾಜು (ಹಿ.ಆ.ಪ) | |
| | | ಶ್ರೀ. ವಿವೇಕ್ (ಕಿ.ಆ.ಪ) | |
| | | ಶ್ರೀ.ಸುಂದರೇಶ್ (ಸ.ಅ) ಯೋಜನೆ | |

ಶ್ರೀ. ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ವಾರ್ಡ್ ನಂ -02 ಹಾಗೂ ಕಾರ್ಯದರ್ಶಿಗಳು ವಾರ್ಡ್ ಸಮಿತಿ ರವರು ಸಭೆಗೆ ಹಾಜರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೊಡೆಲ್ ಅಧಿಕಾರಿರವರನ್ನು ಕೋರಲಾಯಿತು ಮತ್ತು ಸಬೆಯಲ್ಲಿ ಚರ್ಚಸಬೇಕಾದ ವಿಷಯಗಳ ಬಗ್ಗೆ ತಿಳಿಸಲಾಯಿತು.

ಶ್ರೀ ಅಶೋಕ್ ಪಾಟಿಲ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಸಮಿತಿಯ ನೊಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿದರು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಹೆರಿಟೆಜ್ ಅಪಾರ್ಟ್‌ಮೆಂಟ್ ನಲ್ಲಿ ಒಟ್ಟು 5 ಜನಕ್ಕೆ ಕೊರೊನಾ ಪಾಸಿಟಿವ್ ಬಂದಿದ್ದು, ಇಲ್ಲಿ ವಾಸ ಮಾಡುವ ಜನರು ಕೊವಿಡ್ ಟೆಸ್ಟ್ ಮಾಡಿಸಿಕೊಳ್ಳದಿರುವ ಬಗ್ಗೆ ಹಾಗೂ ಪಾಸಿಟಿವ್ ಬಂದಿರುವ ರೋಗಿಗಳು ಹೊರಗಡೆ ಒಡಾಡುತ್ತಿರುತ್ತಾರೆಂದು ಸ್ಥಳೀಯರು ಸಭೆಯಲ್ಲಿ ತಿಳಿಸಿದರು. | ನೊಡೆಲ್ ಅಧಿಕಾರಿಗಳು ಸಂಬಂದಿಸಿದ ಅಪಾರ್ಟ್‌ಮೆಂಟ್ ಮ್ಯಾನೇಜ್‌ಮೆಂಟ್ ರವರಿಗೆ ನೊಟಿಸ್ ನೀಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು (ಯಲಹಂಕ ವಲಯ) |
| 02 | ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ವಿಜಯ ಜ್ಯೋತಿ ಶಾಲೆ ಮುಂಭಾಗ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ರಸ್ತೆ ಅಗೆದಿದ್ದು, ಸಾರ್ವಜನಿಕರು ಒಡಾಟಕ್ಕೆ ಹಾಗೂ ವಾಹನ ಸಂಚಾರಕ್ಕೆ ತೊಂಧರೆ ಉಂಟಾಗುತ್ತಿರುತ್ತದೆ ಎಂದು ಸ್ಥಳೀಯರು ಸಬೆಯಲ್ಲಿ ತಿಳಿಸಿದರು. | ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂಎಸ್.ಎಸ್.ಬಿ ಅಧಿಕಾರಿಗಳಿಗೆ ಅಗೆದಿರುವ ರಸ್ತೆಯನ್ನು ದುರಸ್ಥಿಪಡಿಸಿಕೊಡಲು ಸಭೆಯಲ್ಲಿ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ) |

| | | | |
|---|---|---|---|
| 03 | ವಾರ್ಡ್ ನಂ-02ರ ನಾಗಾರ್ಜುನ ಅಪಾರ್ಟ್‌ಮೆಂಟ್ ಹತ್ತಿರ ಸ್ಟ್ರೀಟ್ ಲೈಟ್ ಉರಿಯುತ್ತಿಲ್ಲವೆಂದು ಹಾಗೂ ವಿದ್ಯುತ್ ಗುತ್ತಿಗೆದಾರರು ಸ್ಥಳಕ್ಕೆ ಬಂದು ರಿಪೇರಿ ಮಾಡದೇ ವಾಪಸ್ಸು ಹೋಗಿರುವ ಬಗ್ಗೆ ಸ್ಥಳೀಯರಾದ ಕಲ್ಲಪ್ಪ ರವರು ಸಭೆಗೆ ದೂರನ್ನು ಸಲ್ಲಿಸಿದರು. | ನೋಡೆಲ್ ಅಧಿಕಾರಿಗಳು ಸ.ಕಾ.ಅ ವಿದ್ಯುತ್ ವಿಭಾಗರವರಿಗೆ ಸದರಿ ಸ್ಥಳದಲ್ಲಿ ವಿದ್ಯುತ್ ರಿಪೇರಿ ಕಾರ್ಯವನ್ನು ನಿರ್ವಹಿಸುವಂತೆ ಸಭೆಯಲ್ಲಿ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) |

ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಕೊರೊನಾ ಪರೀಕ್ಷೆಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಮಾಡಿಸಿಕೊಳ್ಳುವಂತೆ ಹಾಗೂ ವ್ಯಾಕ್ಸಿನೇಷನ್ ಪಡೆದುಕೊಳ್ಳುವಂತೆ ಸಾರ್ವಜನಿಕರಲ್ಲಿ ನೊಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಕೋರಿದರು.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

6/4/2021

ಕಾರ್ಯದರ್ಶಿ
ವಾರ್ಡ್ ಕಮಿಟಿ, ವಾರ್ಡ್ ನಂ. 02( ಚೌಡೇಶ್ವರಿ)

05/04

ನೊಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕ ವಲಯ ರವರ ಮಾಹಿತಿಗಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ಯಲಹಂಕ ವಿಭಾಗ ರವರ ಮಾಹಿತಿಗಾಗಿ.
6. ಕಛೇರಿ ಕಡತಕ್ಕೆ.